# All India Radio: Bangalore
# National Bulletin In Kannada
# 23.04.2025 13.10 p.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**23.04.2025 13.10 p.m.**

*****************

ಮುಖ್ಯಾಂಶಗಳು

1. ಪೆಹಲ್ಗಾಮ್ ಭಯೋತ್ಪಾದಕ ದಾಳಿ; ಉನ್ನತಮಟ್ಟದ ಸಭೆ ನಡೆಸಿದ ಪ್ರಧಾನಿ ನರೇಂದ್ರ ಮೋದಿ
2. ದಾಳಿ ಸ್ಥಳಕ್ಕೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಭೇಟಿ; ಪರಿಶೀಲನೆ
3. ಜಮ್ಮು–ಕಾಶ್ಮೀರದಿಂದ ಪ್ರವಾಸಿಗರನ್ನು ಕರೆದೊಯ್ಯಲು ವಿಶೇಷ ವಿಮಾನಗಳ ಸಂಚಾರಕ್ಕೆ ವ್ಯವಸ್ಥೆ
4. ಐಪಿಎಲ್ ಟಿ–20 ಕ್ರಿಕೆಟ್; ಇಂದು ಸನ್‌ರೈಸರ್ಸ್ ಹೈದರಾಬಾದ್ – ಮುಂಬೈ ಇಂಡಿಯನ್ಸ್ ಮುಖಾಮುಖಿ

*****************

ಜಮ್ಮು–ಕಾಶ್ಮೀರದ ಪಹಲ್ಗಾಮ್ ನಲ್ಲಿ ನಿನ್ನೆ ಸಂಜೆ ಪ್ರವಾಸಿಗರ ಮೇಲೆ ಭಯೋತ್ಪಾದಕರು ನಡೆಸಿದ ದಾಳಿಯಲ್ಲಿ ಕರ್ನಾಟಕದ ಇಬ್ಬರು ಮೃತಪಟ್ಟಿದ್ದಾರೆ. ಇಬ್ಬರು ವಿದೇಶಿ ಪ್ರಜೆಗಳು ಸೇರಿದಂತೆ ಹಲವರು ದಾಳಿಯಲ್ಲಿ ಅಸುನೀಗಿದ್ದಾರೆ. ಪರಿಹಾರ ಕಾರ್ಯ ತ್ವರಿತಗತಿಯಲ್ಲಿ ಸಾಗುತ್ತಿದೆ.

ಪೆಹಲ್ಗಾಮ್ ಭಯೋತ್ಪಾದಕ ದಾಳಿ ಹಿನ್ನೆಲೆಯಲ್ಲಿ ತಮ್ಮ ಸೌದಿ ಅರೇಬಿಯ ಪ್ರವಾಸವನ್ನು ಮೊಟಕುಗೊಳಿಸಿ, ಭಾರತಕ್ಕೆ ಹಿಂತಿರುಗಿರುವ ಪ್ರಧಾನಿ ನರೇಂದ್ರ ಮೋದಿ, ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಹಾಗೂ ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಅವರೊಂದಿಗೆ ಮಹತ್ವದ ಸಭೆ ನಡೆಸಿ, ಪರಿಸ್ಥಿತಿಯನ್ನು ಅವಲೋಕಿಸಿದರು.

ಈ ನಡುವೆ ಕೇಂದ್ರ ಗೃಹ ಸಚಿವ ಅಮಿತ್ ಶಾ ತುರ್ತಾಗಿ ನಿನ್ನೆ ಸಂಜೆ ಜಮ್ಮು–ಕಾಶ್ಮೀರಕ್ಕೆ ಭೇಟಿ ನೀಡಿದ್ದು, ಹಿರಿಯ ಅಧಿಕಾರಿಗಳೊಂದಿಗೆ ಉನ್ನತ ಮಟ್ಟದ ಪರಿಶೀಲನಾ ಸಭೆ ನಡೆಸಿದರು.

ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ, ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ಸೇರಿದಂತೆ ಅನೇಕ ಹಿರಿಯ ಅಧಿಕಾರಿಗಳು ಭದ್ರತಾ ಪಡೆಗಳ ಮುಖ್ಯಸ್ಥರು ಈ ಸಭೆಯಲ್ಲಿ ಪಾಲ್ಗೊಂಡಿದ್ದರು. ಈ ವೇಳೆ ಗೃಹ ಸಚಿವರು ಘಟನಾ ಸ್ಥಳದಲ್ಲಿನ ಭದ್ರತೆ ಸೇರಿದಂತೆ ಜಮ್ಮು–ಕಾಶ್ಮೀರದಾದ್ಯಂತ ಕೈಗೊಳ್ಳಲಾಗಿರುವ ಸುರಕ್ಷತಾ ಕ್ರಮಗಳ ಕುರಿತು ಪರಾಮರ್ಶೆ ನಡೆಸಿದರು. ದಕ್ಷಿಣ ಕಾಶ್ಮೀರದ ಅನಂತನಾಗ್ ಜಿಲ್ಲೆಯ ಶ್ರೀನಗರ ಪ್ರಧಾನ ಕಚೇರಿಯಿಂದ ಸುಮಾರು 85 ಕಿಲೋಮೀಟರ್ ದೂರದಲ್ಲಿ ಈ ಘಟನೆ ಸಂಭವಿಸಿದೆ.

ನಂತರ ಮೃತಪಟ್ಟವರಿಗೆ ಶದ್ಧಾಂಜಲಿ ಸಲ್ಲಿಸಿ, ಸಂತ್ರಸ್ತರೊಂದಿಗೆ ಸಮಾಲೋಚಿಸಿದರು. ಬಳಿಕ ದಾಳಿ ನಡೆದ ಸ್ಥಳಕ್ಕೆ ವಿಶೇಷ ಹೆಲಿಕಾಪ್ಟರ್ ಮೂಲಕ ತೆರಳಿ ಪರಿಶೀಲಿಸಿದರು.

ಈ ನಡುವೆ ಎನ್ ಐಎ ತಂಡ ಹಾಗೂ ಭೂಸೇನಾ ಮುಖ್ಯಸ್ಥ ಲೆಫ್ಟಿನೆಂಟ್ ಜನರಲ್ ಎಂ.ವಿ. ಸುಚೇಂದ್ರ ಅವರು ಸಹ ಭೇಟಿ ನೀಡಿ, ವಸ್ತುಸ್ಥಿತಿಯ ಅವಲೋಕನ ನಡೆಸಲಿದ್ದಾರೆ. ಲಷ್ಕರ್ ಎ– ತೊಯ್ಬಾ ಭಯೋತ್ಪಾದನೆ ಸಂಘಟನೆ ಜೊತೆ ಗುರುತಿಸಿಕೊಂಡಿರುವ ಟಿಆರ್‌ಎಫ್ ಈ ದಾಳಿಯ ಹೊಣೆ ಹೊತ್ತುಕೊಂಡಿದೆ.

****************

ಕಾರ್ಮಿಕ ಸಚಿವ ಸಂತೋಷ್ ಲಾಡ್ ಅಧಿಕಾರಗಳೊಂದಿಗೆ ಕಾಶ್ಮೀರಕ್ಕೆ ತೆರಳಿದ್ದು, ಅಲ್ಲಿ ಕರ್ನಾಟಕದ ಸಂತ್ರಸ್ತರಿಗೆ ಸಾಂತ್ವಾನ ಹೇಳಿದರು. ಮೃತ ದೇಹಗಳನ್ನು ಕರ್ನಾಟಕಕ್ಕೆ ತರಲು ಅಗತ್ಯ ವ್ಯವಸ್ಥೆ ಕೈಗೊಳ್ಳಲಾಗಿದೆ ಎಂದು ಅವರು ತಿಳಿಸಿದ್ದಾರೆ. ಕಾಶ್ಮೀರದಲ್ಲಿ ಸಚಿವರು, ಸಂತ್ರಸ್ತರನ್ನು ಭೇಟಿ ಮಾಡಿ, ಸಾಂತ್ವಾನ ಹೇಳಿದರು.

ಬಿಜೆಪಿ ಸಂಸದ ತೇಜಸ್ವಿ ಸೂರ್ಯ ಅವರೂ ಸಹ ಶ್ರೀನಗರದಲ್ಲಿ ಸಂತ್ರಸ್ತರನ್ನು ಭೇಟಿ ಮಾಡಿದರು. ಮೃತಪಟ್ಟ ಶಿವಮೊಗ್ಗದ ಮಂಜುನಾಥ್ ಅವರ ಪತ್ನಿ ಹಾಗೂ ಪುತ್ರನಿಗೆ ಧೈರ್ಯ ತುಂಬಿದರು. ಮೃತದೇಹಗಳು ಹಾಗೂ ಕುಟುಂಬದ ಸದಸ್ಯರನ್ನು ಕರೆದೊಯ್ಯಲು ವಿಶೇಷ ವಿಮಾನಗಳ ವ್ಯವಸ್ಥೆ ಮಾಡಲಾಗಿದೆ ಎಂದು ತೇಜಸ್ವಿ ಸೂರ್ಯ ಸಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿದ್ದಾರೆ.

ಈ ಮಧ್ಯೆ ಜಮ್ಮು–ಕಾಶ್ಮೀರ ಪ್ರವಾಸಕ್ಕೆ ತೆರಳಿರುವ ಪ್ರವಾಸಿಗರ ವಿವರಗಳನ್ನು ಪಡೆಯಲು ಪ್ರವಾಸೋದ್ಯಮ ಇಲಾಖೆ ಸಹಾಯವಾಣಿ ಆರಂಭಿಸಿದೆ. ಭಯೋತ್ಪಾದಕ ದಾಳಿ ಹಿನ್ನೆಲೆಯಲ್ಲಿ ಕನ್ನಡಿಗರ ಸುರಕ್ಷತೆಯ ಸಲುವಾಗಿ ಪ್ರವಾಸಕ್ಕೆ ತೆರಳಿರುವವರ ಮಾಹಿತಿಯನ್ನು ದೂರವಾಣಿ ಸಂಖ್ಯೆ **080–4334–4334, 080– 4334–4335** ನೀಡಬಹುದಾಗಿದೆ.

****************

ಜಮ್ಮು–ಕಾಶ್ಮೀರದಿಂದ ಪ್ರವಾಸಿಗರನ್ನು ಕರೆದೊಯ್ಯಲು ವಿಶೇಷ ವಿಮಾನಗಳ ಸಂಚಾರಕ್ಕೆ ವ್ಯವಸ್ಥೆ ಮಾಡಲಾಗಿದೆ ಎಂದು ಕೇಂದ್ರ ನಾಗರಿಕ ವಿಮಾನಯಾನ ನಿರ್ದೇಶನಾಲಯ ತಿಳಿಸಿದೆ.

ಈ ಕುರಿತು ಸೂಚನೆ ಹೊರಡಿಸಲಾಗಿದ್ದು, ದೇಶದ ವಿವಿಧ ಭಾಗಗಳಿಗೆ ವಿಶೇಷ ವಿಮಾನಗಳ ಸಂಚಾರ ಆರಂಭಿಸಲಾಗಿದೆ. ವಿಮಾನ ಟಿಕೆಟ್ ರದ್ದುಪಡಿಸುವ ದರ ಹಾಗೂ ಮರು ಪ್ರಯಾಣ ನಿಗದಿ ದರಗಳಲ್ಲಿ ರಿಯಾಯಿತಿ ನೀಡುವಂತೆಯೂ ವಿಮಾನಯಾನ ಸಂಸ್ಥೆಗಳಿಗೆ ಸೂಚಿಸಿದೆ.

****************

ಕಾಶ್ಮೀರದ ಪಹಲ್ಗಾಮ್ ನಿಂದ ಪ್ರವಾಸಿಗರನ್ನು ಸುರಕ್ಷಿತ ಸ್ಥಳಕ್ಕೆ ರವಾನಿಸಲು ವೈಮಾನಿಕ ಕಂಪನಿಗಳು ವಿಮಾನ ಟಿಕೆಟ್ ದರ ಹೆಚ್ಚಳ ಮಾಡದಂತೆ ಸೂಚನೆ ನೀಡಲಾಗಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಹೇಳಿದ್ದಾರೆ.

ದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಈಗಾಗಲೇ ಕಾಶ್ಮೀರದ ಪ್ರವಾಸಿ ತಾಣಗಳಿಂದ ಪ್ರವಾಸಿಗರನ್ನು ಸುರಕ್ಷಿತ ಸ್ಥಳಗಳಿಗೆ ರವಾನಿಸಲಾಗುತ್ತಿದೆ. ಮೃತದೇಹಗಳನ್ನು ತರಲು ಅಗತ್ಯ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

ಭಯೋತ್ಪಾದನಾ ಕೃತ್ಯ ನಡೆದ ಸ್ಥಳದಿಂದ ಹಾಗೂ ಕಾಶ್ಮೀರದ ಇತರೆ ಪ್ರವಾಸಿ ತಾಣಗಳಿಂದ ಪ್ರವಾಸಿಗರ ರಕ್ಷಣಾ ಕಾರ್ಯ ನಡೆದಿದೆ. ಪ್ರವಾಸಿಗರನ್ನು ಸುರಕ್ಷಿತ ಸ್ಥಳಕ್ಕೆ ಕರೆದೊಯ್ಯಲು ಹೆಚ್ಚಿನ ಟಿಕೆಟ್ ದರ ವಿಧಿಸದಿರುವಂತೆ ವೈಮಾನಿಕ ಕಂಪನಿಗಳಿಗೆ ನಿರ್ದೇಶನ ನೀಡಲಾಗಿದೆ. ವಿಮಾನ ಟಿಕೆಟ್ ದರ ಹೆಚ್ಚಳ ಮಾಡದಂತೆ ನಾಗರೀಕ ವಿಮಾನಯಾನ ಸಚಿವರೊಂದಿಗೂ ಸಮಾಲೋಚನೆ ನಡೆಸಿರುವುದಾಗಿ ತಿಳಿಸಿದರು.

ಕಾಶ್ಮೀರದ ಪ್ರವಾಸಿ ತಾಣಗಳಿಂದ ಕನ್ನಡಿಗರು ಸೇರಿದಂತೆ ಪ್ರವಾಸಿಗರ ಸುರಕ್ಷಿತ ಸ್ಥಳಾಂತರಕ್ಕೆ ಕ್ರಮ ಕೈಗೊಳ್ಳಲಾಗಿದೆ. ಗೃಹ ಸಚಿವ ಅಮಿತ್ ಶಾ ಅವರು ಅಲ್ಲಿನ ಪರಿಸ್ಥಿತಿ ಅವಲೋಕಿಸಿ ಸೂಕ್ತ ನಿರ್ಣಯ ತೆಗೆದುಕೊಳ್ಳುತ್ತಿದ್ದಾರೆ. ಜಮ್ಮು–ಕಾಶ್ಮೀರದಲ್ಲಿ 2019 ರಿಂದ ಇತ್ತೀಚಿನ ವರ್ಷಗಳಲ್ಲಿ ಶಾಂತಿ ನೆಲೆಸಿದ್ದನ್ನು ಸಹಿಸದೆ ಹೇಡಿಗಳು ಇಂಥ ಹೇಯ ಕೃತ್ಯವೆಸಗಿದ್ದಾರೆ. ಕೇಂದ್ರ ಸರ್ಕಾರ ಇದಕ್ಕೆ ತಕ್ಕ ಉತ್ತರ ಕೊಡಲಿದೆ ಎಂದು ಅವರು ಹೇಳಿದರು.

*****************

ಜಮ್ಮು–ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ನಡೆದ ಭಯೋತ್ಪಾದಕರ ದಾಳಿಗೆ ವಿಶ್ವದಾದ್ಯಂತ ವ್ಯಾಪಕ ಖಂಡನೆ ವ್ಯಕ್ತವಾಗಿದೆ. ಈ ಸಂಬಂಧ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಜಗದೀಪ್ ಧನಕರ್, ಪ್ರಧಾನಿ ನರೇಂದ್ರ ಮೋದಿ ಹಾಗೂ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟೀನ್ ಸೇರಿದಂತೆ ಹಲವು ಜಾಗತಿಕ ನಾಯಕರು ಘಟನೆಯನ್ನು ತೀವ್ರವಾಗಿ ಖಂಡಿಸಿದ್ದಾರೆ.

ರಾಷ್ಟ್ರಪತಿ ದ್ರೌಪದಿ ಮುರ್ಮು, ಪಹಲ್ಗಾಮ್ ನಲ್ಲಿ ಪ್ರವಾಸಿಗರ ಮೇಲೆ ನಡೆದ ಭಯೋತ್ಪಾದಕ ದಾಳಿ ತೀವ್ರ ಅಘಾತಕಾರಿ ಮತ್ತು ನೋವಿನ ಸಂಗತಿಯಾಗಿದೆ. ಇದೊಂದು ಹೇಯ ಮತ್ತು ಅಮಾನವೀಯ ಕೃತ್ಯವಾಗಿದ್ದು, ನಿಸ್ಸಂದೇಹವಾಗಿ ಖಂಡಿಸಬೇಕು. ಅಮಾಯಕ ನಾಗರಿಕರು ಈ ದಾಳಿಯಲ್ಲಿ ಬಲಿಯಾಗಿದ್ದಾರೆ. ಮೃತಪಟ್ಟವರ ಕುಟುಂಬಗಳಿಗೆ ಹೃದಯಪೂರ್ವಕ ಸಂತಾಪಗಳು ಹಾಗೂ ಗಾಯಾಳುಗಳು ಶೀಘ್ರ ಗುಣಮುಖರಾಗಲಿ ಎಂದು ಪ್ರಾರ್ಥಿಸುವುದಾಗಿ ಹೇಳಿದ್ದಾರೆ.

ಉಪರಾಷ್ಟ್ರಪತಿ ಜಗದೀಪ್ ಧನಕರ್, ಜಮ್ಮು–ಕಾಶ್ಮೀರದ ಪಹಲ್ಗಾಮ್ ನಲ್ಲಿ ನಡೆದ ಭೀಕರ ಭಯೋತ್ಪಾದಕ ದಾಳಿಯಿಂದ ತೀವ್ರ ದುಃಖಿತನಾಗಿದ್ದೇನೆ. ಇಂತಹ ಹಿಂಸಾಚಾರದ ಕೃತ್ಯಗಳು ಖಂಡನೀಯ. ಈ ದುಃಖದ ಸಮಯದಲ್ಲಿ ನಮ್ಮ ಅಲೋಚನೆಗಳು ಮತ್ತು ಪ್ರಾರ್ಥನೆಗಳು ಸಂತ್ರಸ್ತ ಕುಟುಂಬಗಳೊಂದಿಗಿದೆ ಎಂದು ತಿಳಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ,

ಪ್ರವಾಸಿಗರ ಮೇಲೆ ನಡೆದ ಘಟನೆ ಖಂಡನಾರ್ಹ. ಈ ಕೃತ್ಯದಲ್ಲಿ ಪಾಲ್ಗೊಂಡವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು. ಗಾಯಾಳುಗಳು ಶೀಘ್ರವೇ ಗುಣಮುಖರಾಗಲಿ. ಈ ದಾಳಿಯಲ್ಲಿ ಬಾಧಿತರಾದವರಿಗೆ ಎಲ್ಲ ರೀತಿಯ ನೆರವು ನೀಡಲಾಗುವುದು ಎಂದು ಹೇಳಿದ್ದಾರೆ.

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಜಮ್ಮು–ಕಾಶ್ಮೀರದಲ್ಲಿ ನಡೆದ ಭಯೋತ್ಪಾದಕ ದಾಳಿಯನ್ನು ತೀವ್ರವಾಗಿ ಖಂಡಿಸುತ್ತೇವೆ. ಭಯೋತ್ಪಾದನೆ ವಿರುದ್ಧದ ಹೋರಾಟದಲ್ಲಿ ಭಾರತದ ಜೊತೆ ಅಮೆರಿಕ ನಿಲ್ಲಲಿದೆ. ಪ್ರಧಾನಿ ನರೇಂದ್ರ ಮೋದಿ ಅವರಿಗೆ ಸಂಪೂರ್ಣ ಬೆಂಬಲ ವ್ಯಕ್ತಪಡಿಸುತ್ತೇನೆ. ಮೃತರಿಗಾಗಿ ಪ್ರಾರ್ಥಿಸುವ ಜೊತೆಗೆ ಗಾಯಾಳುಗಳು ಶೀಘ್ರ ಗುಣಮುಖರಾಗಲಿ ಎಂದು ಪ್ರಾರ್ಥನೆ ಸಲ್ಲಿಸುತ್ತೇನೆ ಎಂದು ತಿಳಿಸಿದ್ದಾರೆ.

ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಸಹ ಭಯೋತ್ಪಾದಕ ದಾಳಿಯ ಸಂತ್ರಸ್ತರಿಗೆ ಸಂತಾಪ ಸೂಚಿಸಿದ್ದಾರೆ. ವಿವಿಧ ದೇಶಗಳ ನಾಗರಿಕರು ಇದರಲ್ಲಿ ಹತ್ಯೆಯಾಗಿದ್ದಾರೆ. ಈ ಕ್ರೂರ ಅಪರಾಧಕ್ಕೆ ಯಾವುದೇ ಸಮರ್ಥನೆ ಇಲ್ಲ. ತಪ್ಪಿತಸ್ಥರಿಗೆ ಉಗ್ರ ಶಿಕ್ಷೆಯನ್ನು ನಿರೀಕ್ಷಿಸುತ್ತೇವೆ ಎಂದು ಹೇಳಿದ್ದಾರೆ.

*****************

ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯನ್ನು ಎಲ್ಲಾ ರಾಜಕೀಯ ಪಕ್ಷಗಳು ಖಂಡಿಸಿವೆ. ಭೀಕರ ನರಮೇಧ ನಡೆಸಿದವರ ಮೇಲೆ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ, ಈ ಘಟನೆ ಅತ್ಯಂತ ಅಮಾನುಷವಾಗಿದ್ದು, ಸರ್ಕಾರ ತಪ್ಪಿತಸ್ತರಿಗೆ ಪಾಠ ಕಲಿಸಲಿದೆ ಎಂದರು.

ರಕ್ಷಣಾ ಸಚಿವ ರಾಜನಾಥ್ ಸಿಂಗ್, ಇದೊಂದು ಅಮಾನವೀಯ ಕೃತ್ಯ ಎಂದು ಹೇಳಿದ್ದಾರೆ.

ವಾರ್ತಾ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್, ಮೃತಪಟ್ಟವರ ಕುಟುಂಬದ ಸದಸ್ಯರಿಗೆ ಸಂತಾಪ ವ್ಯಕ್ತಪಡಿಸಿದ್ದಾರೆ.

ರುವಾರಿಗಳ ಮೇಲೆ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಒತ್ತಾಯಿಸಿದ್ದಾರೆ.

ಘಟನೆ ಕುರಿತು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರೊಂದಿಗೆ ದೂರವಾಣಿ ಮೂಲಕ ಮಾತನಾಡಿದ ಮಲ್ಲಿಕಾರ್ಜುನ ಖರ್ಗೆ ಹಾಗೂ ರಾಹುಲ್ ಗಾಂಧಿ ಭಯೋತ್ಪಾದನೆ ವಿರುದ್ಧದ ಹೋರಾಟಕ್ಕೆ ಎಲ್ಲಾ ರೀತಿಯಿಂದಲೂ ಬೆಂಬಲ ನೀಡುವುದಾಗಿ ಹೇಳಿದ್ದಾರೆ.

ದಾಳಿಕೋರರು, ಕಾನೂನಿನ ಕುಣಿಕೆಯಿಂದ ತಪ್ಪಿಸಿಕೊಳ್ಳಬಾರದು. ಇದೊಂದು ಬರ್ಬರ ಕೃತ್ಯ ಎಂದು ಮಲ್ಲಿಕಾರ್ಜುನ ಖರ್ಗೆ ಹೇಳಿದ್ದಾರೆ.

ರಾಹುಲ್ ಗಾಂಧಿ, ಜಮ್ಮು ಕಾಶ್ಮೀರ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ಅವರೊಂದಿಗೆ ಸಮಾಲೋಚನೆ ನಡೆಸಿದರು.

ಕರ್ನಾಟಕ ಮುಖ್ಯಮಂತ್ರಿ ಸಿದ್ದರಾಮಯ್ಯ, ಬಿಹಾರ ಮುಖ್ಯಮಂತ್ರಿ ನಿತೀಶ್ ಕುಮಾರ್, ಪಶ್ಚಿಮ ಬಾಂಗಳ ಮಮತಾ ಬ್ಯಾನರ್ಜಿ, ಆಂಧ್ರಪ್ರದೇಶ ಮುಖ್ಯಮಂತ್ರಿ ಎನ್.ಚಂದ್ರಬಾಬು ನಾಯ್ಡು, ತಮಿಳುನಾಡು ಮುಖ್ಯಮಂತ್ರಿ ಎಂ.ಕೆ.ಸ್ಟಾಲಿನ್, ಎಲ್‌ಜಪಿ ನಾಯಕ ಚಿರಾಗ್ ಪಾಸ್ವಾನ್, ಸಮಾಜವಾದಿ ಪಕ್ಷದ ಮುಖಂಡ ಅಖಿಲೇಶ್ ಯಾದವ್ ಮತ್ತಿತರರು ಘಟನೆಯನ್ನು ಖಂಡಿಸಿದ್ದಾರೆ.

ಕೇಂದ್ರ ಸಚಿವ ರಾಮದಾಸ್ ಅಠಾವಳೆ ಈ ಕುರಿತು ಪ್ರತಿಕ್ರಿಯೆ ನೀಡಿ, ಭಯೋತ್ಪಾದನೆ ವಿಚಾರದಲ್ಲಿ ರಾಜಕೀಯ ಸಲ್ಲದು ಎಂದರು.

ಧ್ವನಿ: ರಾಮದಾಸ್ ಅಠಾವಳ

*****************

ಹೈದರಾಬಾದ್‌ನ ರಾಜೀವ್ ಗಾಂಧಿ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಇಂಡಿಯನ್ ಪ್ರೀಮಿಯರ್ ಲೀಗ್ –ಐಪಿಎಲ್ ಟಿ–20 ಕ್ರಿಕೆಟ್ ಪಂದ್ಯದಲ್ಲಿ ಸನ್‌ರೈಸರ್ಸ್ ಹೈದರಾಬಾದ್ ಹಾಗೂ ಮುಂಬೈ ಇಂಡಿಯನ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ 7.30 ಕ್ಕೆ ಆರಂಭವಾಗಲಿದೆ.

*********ಮುಕ್ತಾಯ********